ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಕಡುಹಿನ ಬೈಲು ಏತ ನೀರಾವರಿ ಯೋಜನೆಯು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದ್ದು, ಆಡಳಿತಾತ್ಮಕ ಅನುಮೋದನೆ ನೀಡಿದ ನಂತರ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸಲು ಮುಂದಿನ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

2302(1962) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮತ್ತು ಶ್ರೀ ಆರ್. ಅಶೋಕ್ (ಉತ್ತರಹಳ್ಳಿ):– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೇ 2004 ರಿಂದ ಇಲ್ಲಿಯವರೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಂಚಿಕೆ ಮಾಡಿರುವ ವಿವಿಧ ಅಳತೆಗಳುಳ್ಳ ನಿವೇಶನಗಳ ಸಂಖ್ಯೆ ಎಷ್ಟು;

ಆ) ದೇಶದಲ್ಲಿಯೇ ಅತ್ಯಂತ ದೊಡ್ಡ ಬಡಾವಣೆಯನ್ನು ಕೆಂಗೇರಿ ಬಳಿ ನಿರ್ಮಿಸಲು ಸರ್ಕಾರ ಉದ್ದೇಶಿಸಿದೆಯೇ;

ಇ) ಹಾಗಿದ್ದಲ್ಲಿ, ಈ ಉದ್ದೇಶಿತ ಬಡಾವಣೆಯಲ್ಲಿ ಹಂಚಿಕೆ ಮಾಡಲಿರುವ ನಿವೇಶನಗಳ ಸಂಖ್ಯೆ ಎಷ್ಟು;

ಈ) ಇದಕ್ಕಾಗಿ ಬೇಕಾಗುವ ಜಮೀನೆಷ್ಟು;

ಉ) ಈ ಜಮೀನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ;

ಊ) ಈಗಾಗಲೇ ನಿರ್ಮಿಸಿರುವ ಹಾಗೂ ನಿವೇಶನಗಳನ್ನು ಹಂಚಿಕೆ ಮಾಡಿರುವ ಕೆಲವು ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿ ನಂತರ ಹೊಸ ಬಡಾವಣೆಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು):–

ಅ) ಮೇ 2004 ರಿಂದ ಈಚೆಗೆ ನಿವೇಶನಗಳನ್ನು ಹಂಚಿಕೆ ಮಾಡಿರುವುದಿಲ್ಲ.

ಆ) ಈ ಬಗ್ಗೆ ಇನ್ನೂ ನಿರ್ಣಯ ತೆಗೆದುಕೊಂಡಿರುವುದಿಲ್ಲ.

ಇ&ಈ&ಉ) ಉದ್ಭವಿಸುವುದಿಲ್ಲ.

ಊ) ಈಗಾಗಲೇ ನಿರ್ಮಿಸಿರುವ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

2303(1963) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮತ್ತು ಶ್ರೀ ಆರ್. ಅಶೋಕ್ (ಉತ್ತರಹಳ್ಳಿ):– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ಮಹಾನಗರ ಪಾಲಿಕೆಯ 100 ವಾರ್ಡ್‌ಗಳಲ್ಲಿ ಇರತಕ್ಕ ಆಟದ ಮೈದಾನಗಳ ಸಂಖ್ಯೆ ಎಷ್ಟು (ವಾರ್ಡುವಾರು ವಿವರ ನೀಡುವುದು);